# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 305 |
| ಸದಸ್ಯರ ಹೆಸರು | ಶ್ರೀ ಶರವಣ ಟಿ.ಎ. |
| ಉತ್ತರಿಸುವ ದಿನಾಂಕ | 14-09-2022 |
| ಉತ್ತರಿಸುವವರು | ಮುಜರಾಯಿ, ಹಜ್ ಹಾಗೂ ವಕ್ಫ್ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ದೇಗುಲಗಳ ಮೇಲೆ ಸರ್ಕಾರದ ನಿಯಂತ್ರಣ ತೆರವು ಮಾಡಿ ಅವುಗಳನ್ನು ಸ್ವಾಯುತ್ತಗೊಳಿಸುವ ಚಿಂತನೆ ಸರ್ಕಾರಕ್ಕೆ ಇದೆಯೇ; (ವಿವರ ನೀಡುವುದು) | ರಾಜ್ಯದಲ್ಲಿ ಅಧಿಸೂಚಿತ ದೇಗುಲಗಳ ಮೇಲೆ ಸರ್ಕಾರದ ನಿಯಂತ್ರಣ ತೆರವುಗೊಳಿಸುವ ಚಿಂತನೆ ಇರುವುದಿಲ್ಲ. ಆದರೆ, ದೇವಾಲಯಗಳಿಗೆ ಸ್ವಾಯತ್ತತೆ ನೀಡಿ ಅಭಿವೃದ್ಧಿ ಕಾಮಗಾರಿಗಳ ವಿವೇಚನೆಯನ್ನು ದೇವಾಲಯಗಳಿಗೆ ಪ್ರತ್ಯಾಯೋಜಿಸಲು ಕಾನೂನು ಕ್ರಮ ಕೈಗೊಳ್ಳಲು ಅನುಮೋದನೆ ನೀಡಲಾಗಿರುತ್ತದೆ.<br><br>ಸರ್ಕಾರದ ಆದೇಶ ಸಂಖ್ಯೆ:ಕಂಇ/141/ಮುಅಬಿ/2022 ದಿನಾಂಕ: 12.04.2022ರಲ್ಲಿ, 2022-23ನೇ ಸಾಲಿನ ಆಯವ್ಯಯ ಭಾಷಣದಲ್ಲಿನ ಕಂಡಿಕೆ-367ರಲ್ಲಿನ ಘೋಷಣೆಯಂತೆ, ದೇವಾಲಯಗಳನ್ನು ಸರ್ಕಾರದ ನಿಯಂತ್ರಣದಿಂದ ಮುಕ್ತಗೊಳಿಸಬೇಕೆಂಬ ಬೇಡಿಕೆ ಬಹುಕಾಲದಿಂದ ಕೇಳಿ ಬರುತ್ತಿದೆ. ಭಕ್ತಾದಿಗಳ ಈ ಬೇಡಿಕೆಯನ್ನು ಪರಿಗಣಿಸಿ, ಧಾರ್ಮಿಕ ದತ್ತಿ ಇಲಾಖೆ ವ್ಯಾಪ್ತಿಯಲ್ಲಿರುವ ದೇವಾಲಯಗಳಿಗೆ ಸ್ವಾಯತ್ತತೆ ನೀಡಿ, ಅಭಿವೃದ್ಧಿ ಕಾಮಗಾರಿಗಳ ವಿವೇಚನೆಯನ್ನು ದೇವಾಲಯಗಳಿಗೆ ಪ್ರತ್ಯಾಯೋಜಿಸಲು ಕಾನೂನು ಕ್ರಮ ಕೈಗೊಳ್ಳಲು ತಾತ್ವಿಕ ಅನುಮೋದನೆ ನೀಡಿರುತ್ತದೆ. |
| ಆ) | ಈ ತೀರ್ಮಾನ ಜಾರಿಗೆ ಬಂದಲ್ಲಿ ಅರ್ಚಕ ಸಮುದಾಯ ಮತ್ತು ಇತರೆ ಸಿಬ್ಬಂದಿಗಳ ವೇತನ ಸೇರಿದಂತೆ ಅವರ ಜೀವನ ಭದ್ರತೆಯ ಮುಂದಿನ ಭವಿಷ್ಯ ಏನು; | ಧಾರ್ಮಿಕ ದತ್ತಿ ಇಲಾಖಾ ವ್ಯಾಪ್ತಿಗೊಳಪಡುವ ದೇವಾಲಯಗಳ ಅಭಿವೃದ್ಧಿ ಕಾಮಗಾರಿಗಳಿಗೆ ಮಾತ್ರ ವಿವೇಚನೆಯನ್ನು ದೇವಾಲಯಗಳಿಗೆ ಅನುಮತಿ ನೀಡಿದ್ದು, ಉಳಿದಂತೆ ಅರ್ಚಕ ಸಮುದಾಯ ಮತ್ತು ಇತರೆ ಸಿಬ್ಬಂದಿಗಳ ವೇತನಕ್ಕೆ ಸಂಬಂಧಿಸಿದಂತೆ ಪ್ರಸ್ತುತ, ಜಾರಿಯಲ್ಲಿರುವ ಕಾರ್ಯ್ವಯಂತೆ ಸರ್ಕಾರದ ನಿಯಂತ್ರಣದಲ್ಲಿಯೇ ಮುಂದುವರೆಯುತ್ತಿದೆ. |
| ಇ) | ದೇಗುಲಗಳ ಸ್ವಾಯತ್ತತೆಗೆ ಸರ್ಕಾರ ರೂಪಿಸಿರುವ ಮಾನದಂಡಗಳೇನು? | ಸರ್ಕಾರದ ದಿನಾಂಕ:12.04.2022ರನ್ವಯ ದೇಗುಲಗಳ ಸ್ವಾಯತ್ತತೆಗೆ ತಾತ್ವಿಕ ಅನುಮೋದನೆ ಮಾತ್ರ ನೀಡಲಾಗಿದೆ |

ಸಂಖ್ಯೆ: ಕಂಇ 146 ಮುಸಪು 2022

(ಶಶಿಕಲಾ. ಅ. ಜೊಲ್ಲೆ)
ಮುಜರಾಯಿ, ಹಜ್ ಹಾಗೂ ವಕ್ಫ್ ಸಚಿವರು